Fax : 08192 - 208008
Telephone : 08192 - 208309
website : davangereuniversity.ac.in
e-mail : cdcdu2013@gmail.com

# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ – 577 007.

## ಕಾಲೇಜು ಅಭಿವೃದ್ಧಿ ಪರಿಷತ್

ಸಂ:ದಾವಿವಿ/ಸಿಡಿಸಿ/ಸಂಯೋ–138/2024–25/441 ದಿನಾಂಕ:15.05.2024

## ಪ್ರಕಟಣೆ

ವಿಷಯ : ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ 2024–25ನೇ ಶೈಕ್ಷಣಿಕ ಸಾಲಿಗೆ ಸಂಯೋಜನಾ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ : 1. ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಯುಎನ್ಇ 2023, ದಿನಾಂಕ:08.05.2024
2. ಮಾನ್ಯ ಕುಲಪತಿಗಳವರ ಅನುಮೋದನೆ ದಿನಾಂಕ:13.05.2024

********

ವಿಶ್ವವಿದ್ಯಾನಿಲಯ ವ್ಯಾಪ್ತಿಯ ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ 2024–25ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಕಲಾ, ವಿಜ್ಞಾನ, ವಾಣಿಜ್ಯ, ಆಡಳಿತ ನಿರ್ವಹಣೆ, ಶಿಕ್ಷಣ ಮತ್ತು ದೈಹಿಕ ಶಿಕ್ಷಣ ಹಾಗೂ ಇನ್ನಾವುದೇ ಸಾಂಪ್ರದಾಯಿಕ ವಿಷಯಗಳಲ್ಲಿ ಪದವಿ ಕಾಲೇಜುಗಳನ್ನು ರಾಜ್ಯ ಸರ್ಕಾರದ/ ವಿಶ್ವವಿದ್ಯಾನಿಲಯದ ಅನುದಾನದ ಅಪೇಕ್ಷೆ ಇಲ್ಲದೆ ಪ್ರಾರಂಭಿಸಲು ಆರ್ಥಿಕ ಸಾಮರ್ಥ್ಯವುಳ್ಳ ನೋಂದಾಯಿತ ಸೊಸೈಟಿ/ ಸಾರ್ವಜನಿಕ ಟ್ರಸ್ಟ್/ಸಂಸ್ಥೆಗಳಿಂದ ನವೀನ ಸಂಯೋಜನೆಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಲ್ಲದೆ, ಪ್ರಸ್ತುತ ವಿಶ್ವವಿದ್ಯಾನಿಲಯದ ಸಂಯೋಜನೆ ಹೊಂದಿರುವ ಕಾಲೇಜುಗಳು ತಮ್ಮ ಕಾಲೇಜುಗಳ ಮುಂದುವರಿಕೆ ಸಂಯೋಜನೆ; ನವೀನ ಶಾಶ್ವತ ಸಂಯೋಜನೆ; ಶಾಶ್ವತ ಸಂಯೋಜನೆ ಪರಿಶೀಲನೆ; ಶಾಶ್ವತ ಸಂಯೋಜನೆ ನವೀಕರಣ; ಹೊಸ ಪದವಿ; ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ನವೀನ ಸಂಯೋಜನೆ; ಹೊಸ ಐಚ್ಛಿಕ ವಿಷಯ ಸಮೂಹ; ಹೊಸ ಭಾಷಾ ವಿಷಯಗಳ ನವೀನ ಸಂಯೋಜನೆ; ವಿದ್ಯಾರ್ಥಿ ಪ್ರಮಾಣದ ವಿಸ್ತರಣೆ; ಕಾಲೇಜಿನ ಹೆಸರು ಬದಲಾವಣೆ; ಸ್ಥಳ ಬದಲಾವಣೆ; ಸಹ ಶಿಕ್ಷಣ ಕಾಲೇಜಾಗಿ ಪರಿವರ್ತಿಸಲು ಮುಂತಾದವುಗಳಿಗೆ ಸಂಬಂಧಿಸಿದಂತೆ 2024–25ನೇ ಶೈಕ್ಷಣಿಕ ವರ್ಷಕ್ಕಾಗಿ ಸಂಯೋಜನಾ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

**2024–25ನೇ ಸಾಲಿನ ಸಂಯೋಜನಾ ಪ್ರಸ್ತಾವನೆಗಳ ಅರ್ಜಿಗಳನ್ನು ಕಡ್ಡಾಯವಾಗಿ UUCMS ಅನ್‌ಲೈನ್ ತಂತ್ರಾಂಶದ ಮೂಲಕ ಸಲ್ಲಿಸುವುದು.**
**ಸಂಯೋಜನೆಗೆ ಸಂಬಂಧಿಸಿದ ಇತರೆ ಮಾಹಿತಿಗಳು ಈ ಕೆಳಕಂಡಂತೆ ಇರುತ್ತವೆ.**

1. ಕರ್ನಾಟಕ ರಾಜ್ಯ ಸರ್ಕಾರದ ಸುತ್ತೋಲೆ ದಿನಾಂಕ:18.02.2022ರನ್ವಯ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಈಗಾಗಲೇ ಅಸ್ತಿತ್ವದಲ್ಲಿರುವ ಕಾಲೇಜುಗಳು ತಮ್ಮ ಜಮೀನು ಕುರಿತು ಈ ಕೆಳಕಂಡಂತೆ ಮಾನದಂಡಗಳನ್ನು ಅನುಸರಿಸಲು ಸೂಚಿಸಲಾಗಿದೆ.
   a) Not less than 0.5 acres if it is located in the mega cities.
   b) 01 acre it is located in BMRDA, City Corporation and district head quarters.
   c) 1.5 acres if it is located in Municipalities or taluk head quarters.
   d) 03 acres if it is in any other rural areas.

2. ಸಂಯೋಜಿತ ಕಾಲೇಜುಗಳವರು ಬಿ.ಸಿ.ಎ., ಬಿ.ಬಿ.ಎ/ಬಿ.ಬಿ.ಎಂ., ಪದವಿ ಕೋರ್ಸುಗಳಿಗೆ ಸಂಯೋಜನೆ ಪಡೆದ ಕಾಲೇಜುಗಳವರು ಕಡ್ಡಾಯವಾಗಿ ಯುಜಿಸಿ/AICTE ಸಂಸ್ಥೆ, ನವದೆಹಲಿ ಇವರಿಂದ ನಿಯಮಾನುಸಾರ ಅನುಮೋದನೆ ಪಡೆದಿರತಕ್ಕದ್ದು.

3. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಬಿ.ಎ., ಎ.ಎಸ್ಸಿ., ಬಿ.ಕಾಂ., ಬಿ.ಸಿ.ಎ., ಬಿ.ಬಿ.ಎ/ಬಿ.ಬಿ.ಎಂ., ಬಿ.ಎಸ್‌ಡಬ್ಲ್ಯೂ., ಪದವಿ **ಕೋರ್ಸುಗಳ ಪ್ರತಿ ಹೆಚ್ಚುವರಿ ವಿಭಾಗ ಮತ್ತು ಪ್ರತಿ ಐಚ್ಛಿಕ ವಿಷಯ ಸಮೂಹಕ್ಕೆ(ಒಂದು ವಿಭಾಗಕ್ಕೆ 01 ರಿಂದ 60**



Scanned with AltaScanner

ಪ್ರವೇಶಮಿತಿ ನಿಗಧಿಗೊಳಿಸಿದೆ) ನಿಗಧಿತ ಶುಲ್ಕದೊಂದಿಗೆ ಹೆಚ್ಚುವರಿ ಶುಲ್ಕ ನಿಗಧಿಪಡಿಸಲಾಗಿದ್ದು, ಅನುಬಂಧ-01 ತಿಳಿಸಿರುವಂತೆ ವಿವಿಧ ಶುಲ್ಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸತಕ್ಕದ್ದು.

4. ಕಾಲೇಜಿನ ಯಾವುದೇ ವಿಧದ ಸಂಯೋಜನೆಗೆ ಸಂಬಂಧಿಸಿದಂತೆ, ಕಾಲೇಜುಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಿಗೆ ಸರ್ಕಾರದ ಆದೇಶಾನುಸಾರ ಕನಿಷ್ಠ ಸಂಯೋಜನಾ ಅಂಕಗಳು(Affiliation Marks) ಹಾಗೂ ಎಲ್ಲಾ 8 ಮಾನದಂಡಗಳನ್ನು(Defined Parameters) ಕಡ್ಡಾಯವಾಗಿ ಪೂರೈಸಬೇಕು.

5. ಈ ಹಿಂದೆ ವಿಶ್ವವಿದ್ಯಾಲಯದಿಂದ ಸಂಯೋಜನೆ ಪಡೆದಿರುವ ಕಾಲೇಜುಗಳು ಪ್ರಸಕ್ತ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಎ 2021, ಬೆಂಗಳೂರು, ದಿನಾಂಕ:12.02.2021ರ ಆದೇಶಾನುಸಾರ, Score and Decision Criteriaನಲ್ಲಿ ನಿಗದಿಪಡಿಸಿದಂತೆ ಎಲ್ಲಾ 8 ಮಾನದಂಡಗಳನ್ನು (Defined Parameters) ಹಾಗೂ ಸಂಯೋಜನಾ ವಿಧಗಳನುಸಾರ ಕನಿಷ್ಠ ಸಂಯೋಜನಾ ಅಂಕಗಳನ್ನು (Affiliation Marks) ಹೊಂದುವುದು ಕಡ್ಡಾಯವಾಗಿದೆ. ಒಂದು ವೇಳೆ ಹೊಂದದೇ ಇದ್ದಲ್ಲಿ, 2 ವರ್ಷಗಳ ನಂತರ ಅಂತಹ ಕಾಲೇಜಿನ ಕೋರ್ಸ್‌ಗಳ ಪ್ರಥಮ ವರ್ಷದ ಪ್ರವೇಶಾತಿಯನ್ನು ನಿಷಿದ್ಧಗೊಳಿಸಲಾಗುವುದು. ಅಂತಹ ಸಂದರ್ಭದಲ್ಲಿ ದ್ವಿತೀಯ ಹಾಗೂ ತೃತೀಯ ಪದವಿ ವರ್ಷದ ವಿದ್ಯಾರ್ಥಿಗಳು, ತಮ್ಮ ಅಂತಿಮ ವರ್ಷದ ಪದವಿ ತರಗತಿಗಳನ್ನು ಪೂರ್ಣಗೊಳಿಸುವವರೆಗೆ ಮಾತ್ರ ಆ ಕಾಲೇಜುಗಳನ್ನು ನಡೆಸಲು ಅವಕಾಶ ನೀಡಿ, ನಂತರ ಆ ಕಾಲೇಜುಗಳ ಸಂಯೋಜನೆಯನ್ನು ನಿಯಮಾನುಸಾರ ರದ್ದುಪಡಿಸಲಾಗುವುದು.

6. ಬಿ.ಇಡಿ.,/ಬಿ.ಪಿ.ಇಡಿ., ಬಿ.ಎ.,ಬಿ.ಇಡಿ.,/ಬಿ.ಎಸ್ಸಿ.ಬಿ.ಇಡಿ., ಅಥವಾ ಇತರೆ ವೃತ್ತಿಪರ ಕಾಲೇಜು ಪ್ರಾರಂಭಿಸಲು ಇಚ್ಛಿಸುವ ನೋಂದಾಯಿತ ಸಂಸ್ಥೆಗಳು, ಸಂಯೋಜನಾ ಅರ್ಜಿ ಸಲ್ಲಿಸುವ ಮೊದಲು, ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಪರಿಷತ್ತಿನ(ಎನ್.ಸಿ.ಟಿ.ಇ) ಅಥವಾ ಸಂಬಂಧಿಸಿದ ಇತರೆ ಸಕ್ಷಮ ಪ್ರಾಧಿಕಾರಗಳ ಪೂರ್ವಾನುಮೋದನೆಯನ್ನು ಕಡ್ಡಾಯವಾಗಿ ಪಡೆದಿರಬೇಕು. ಹಾಗು ವಿಶ್ವವಿದ್ಯಾನಿಲಯದಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದಿರಬೇಕು.

7. ಸಂಯೋಜಿತ ಕಾಲೇಜುಗಳು ಸಂಯೋಜನಾ ಅರ್ಜಿಯನ್ನು ಸಲ್ಲಿಸುವಾಗ ವಿಶ್ವವಿದ್ಯಾನಿಲಯದ ಪರಿನಿಯಮಾವಳಿಯನ್ವಯ ಅನುಮೋದನೆಗೊಂಡಿರುವ ಪದವಿ ಕೋರ್ಸು/ವಿಷಯ/ಐಚ್ಛಿಕ ವಿಷಯಗಳಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

8. ಐದು (05) ವರ್ಷಗಳ ನಿರಂತರ ತಾತ್ಕಾಲಿಕ ಸಂಯೋಜನೆಯನ್ನು ಪಡೆದಿರುವ ಕಾಲೇಜುಗಳು ಪ್ರಸ್ತುತ ಅಸ್ತಿತ್ವದಲ್ಲಿರುವ ಕೋರ್ಸು/ವಿಷಯಗಳಿಗೆ ಸ್ಥಳೀಯ ತಪಾಸಣಾ ಸಮಿತಿ ವಿಧಿಸಿರುವ ಷರತ್ತುಗಳನ್ನು ಸಂಪೂರ್ಣವಾಗಿ ಪಾಲಿಸಿ, ವಿಶ್ವವಿದ್ಯಾನಿಲಯ ಮತ್ತು ಯುಜಿಸಿ-ಯಿಂದ ಕಾಲ-ಕಾಲಕ್ಕೆ ನಿಗದಿಪಡಿಸುವ ಶೈಕ್ಷಣಿಕ ಗುಣಮಟ್ಟ ಹೊಂದಿದ್ದಲ್ಲಿ ಮತ್ತು ನ್ಯಾಕ್ ಸಂಸ್ಥೆಯ ಮಾನ್ಯತೆ ಪಡೆದಿದ್ದಲ್ಲಿ ಅಂತಹ ಕಾಲೇಜುಗಳು ಶಾಶ್ವತ ಸಂಯೋಜನೆ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಬಹುದು.

9. ಸ್ನಾತಕೋತ್ತರ ಪದವಿ ಕೋರ್ಸ್‌ಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಕಾಲೇಜುಗಳು ವಿಶ್ವವಿದ್ಯಾಲಯದಿಂದ ಶಾಶ್ವತ ಸಂಯೋಜನೆಯನ್ನು ಪಡೆದಿರಬೇಕು. ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಸ್ನಾತಕೋತ್ತರ ಪದವಿ ಕೋರ್ಸಿಗೆ ಸಂಬಂಧಿಸಿದ ವಿಷಯದಲ್ಲಿ ಯು.ಜಿ.ಸಿ/ಸರ್ಕಾರಿ ನಿಯಮಾವಳಿಯನ್ವಯ ಕನಿಷ್ಠ ನಾಲ್ವರು ಅಧ್ಯಾಪಕರನ್ನು ಹೊಂದಿದ್ದು, ಅವರುಗಳಿಗೆ ಸ್ನಾತಕೋತ್ತರ ವಿಷಯ ಬೋಧನೆಗೆ ಆದೇಶ ನೀಡಿರಬೇಕು. ಅಲ್ಲದೆ, ಅವರಲ್ಲಿ ಇಬ್ಬರು Ph.D., ಪದವಿ ಹೊಂದಿದವರಾಗಿಬೇಕು. ***ಸದರಿ ಅಧ್ಯಾಪಕರನ್ನು, ಸ್ನಾತಕ ಪದವಿ ತರಗತಿಗಳಿಗೆ ಬೋಧನೆಗೆ ಅವಕಾಶ ನೀಡಿರಬಾರದು.*** ಸ್ನಾತಕೋತ್ತರ ವ್ಯಾಸಂಗದ ಜೊತೆಗೆ ಸಂಶೋಧನಾ ಕಾರ್ಯಕ್ಕಾಗಿ ವಿಶ್ವವಿದ್ಯಾನಿಲಯ ಮತ್ತು ಸರ್ಕಾರದ ಮಾರ್ಗಸೂಚಿಯನ್ವಯ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರಬೇಕು. ಅಂತಹ ಸೌಲಭ್ಯವುಳ್ಳ ಕಾಲೇಜುಗಳು 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಪ್ರಾರಂಭಿಸಲು ದ್ವಿಪ್ರತಿಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

10. **ಹೊಸ ಕಾಲೇಜು ಪ್ರಾರಂಭಿಸಲು ನವೀನ ಸಂಯೋಜನೆಗಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವ ನೋಂದಾಯಿತ ಸಂಘ ಸಂಸ್ಥೆಗಳು ಅರ್ಜಿಯೊಡನೆ ಈ ಕೆಳಕಂಡ ದಾಖಲಾತಿಗಳನ್ನು ತಪ್ಪದೆ ಲಗತ್ತಿಸತಕ್ಕದ್ದು.**

10.1. ವಿದ್ಯಾಸಂಸ್ಥೆಯ ನೋಂದಣಿ ಪತ್ರದ ದೃಢೀಕೃತ ಪ್ರತಿ.

10.2. ಮೆಮೊರಾಂಡಮ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್, ರೂಲ್ಸ್, ರೆಗ್ಯುಲೇಶನ್ಸ್ ಮತ್ತು ಬೈಲಾ ಪ್ರತಿ.

10.3. ಟ್ರಸ್ಟ್ ಆಗಿದ್ದರೆ ಆ ಟ್ರಸ್ಟ್ ಡೀಡ್‌ನ ಒಂದು ಪ್ರತಿ ಹಾಗೂ ಸಂಬಂಧಪಟ್ಟ ಕಾಯಿದೆಯಡಿಯಲ್ಲಿ ನೋಂದಣಿಯಾಗಿರುವುದಕ್ಕೆ ದೃಢೀಕೃತ ಪ್ರತಿ ಮತ್ತು ಶೈಕ್ಷಣಿಕ ಉಪಯೋಗಕ್ಕೆ ಸಂಬಂಧಪಟ್ಟಂತೆ ಟ್ರಸ್ಟ್‌ನಲ್ಲಿ ತೆಗೆದುಕೊಂಡ ನಿರ್ಣಯದ ಪ್ರತಿ.



Scanned with AltaScanner

10.4. ಸೊಸೈಟಿ/ಟ್ರಸ್ಟ್ ಲೆಕ್ಕಗಳ ಆಡಿಟ್ ವರದಿಯ ಪ್ರತಿ. (ಕನಿಷ್ಠ ಕಳೆದ ಮೂರು ವರ್ಷಗಳದ್ದು)

10.5. ಕಾಲೇಜಿನ ಲೆಕ್ಕಗಳ ಆಡಿಟ್ ವರದಿ ಪ್ರತಿ.

10.6. ಹಿಂದಿನ ವರ್ಷದ ವಾರ್ಷಿಕ ವರದಿಯ ಪ್ರತಿ.

10.7. ಉದ್ದೇಶಿತ ಕಾಲೇಜಿನ ಸ್ಥಾಪನೆಗೆ ನಿಗದಿಪಡಿಸಿರುವ ಸ್ಥಳ ಮತ್ತು ಅದರ ಸೂಕ್ತತೆ ವಿವಾದ ಮುಕ್ತವಾಗಿರುವ ಬಗೆಗೆ ಅಫಿಡಾವಿಟ್ ಸಲ್ಲಿಸುವುದು.

10.8. ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಯವರು ಪೂರಕವಾಗಿ ಸಂಬಂಧಿಸಿದ ಇಲಾಖೆಯಿಂದ ಪಡೆದಿರುವ ಪ್ರಮಾಣಪತ್ರ,

10.9. ಕಾಲಕಾಲಕ್ಕೆ ರಚಿಸಿರುವ/ರಚಿಸಲಾಗುವ ವಿಶ್ವವಿದ್ಯಾಲಯದ ಅಧಿನಿಯಮ(Act) ಪರಿನಿಯಮ/ಶಾಸನ (Statute); ನಿಬಂಧನೆ (Regulations); ಅಧ್ಯಾದೇಶ (Ordinance); ನಿಯಮ (Rule) ಮತ್ತು ನಿರ್ದೇಶನಗಳಿಗೆ ಬದ್ಧರಾಗಿರುವುದಾಗಿ ತಿಳಿಸುವ ಅಫಿಡಾವಿಟ್ ಪತ್ರವನ್ನು (Undertaking) ರೂ.100=00 ಛಾಪಾ ಕಾಗದದಲ್ಲಿ ಮುದ್ರಿಸಿ ನೋಟರಿಯವರಿಂದ ದೃಢೀಕರಿಸಿ ಅರ್ಜಿಯೊಡನೆ ಲಗತ್ತಿಸುವುದು.

10.10. ಉದ್ದೇಶಿತ ಕಾಲೇಜಿನ ಸ್ಥಾಪನೆಗೆ ಕಟ್ಟಡಗಳ ಸಧೃಡತೆ/ ಸುರಕ್ಷತೆ ಕುರಿತು National Building Code-2016ರ ನಿಯಮಾನುಸಾರ ಹಾಗೂ ಸರ್ಕಾರದ ನಿರ್ದೇಶಾನುಸಾರ ಲೋಕೋಪಯೋಗಿ ಇಲಾಖೆ ಮತ್ತು Fire Service Department ನಿಂದ (Compliance Certificates) ಧೃಢೀಕರಣ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.

10.11. ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ನವೀನ ಕಾಲೇಜು ಪ್ರಾರಂಭಿಸಲು ಇಚ್ಛಿಸುವ ಉದ್ದೇಶಿತ ಕಾಲೇಜಿನ ಸ್ಥಾಪನೆಗೆ ಜಮೀನಿನ ಕುರಿತು ಕ್ರಸಂ:01ರಲ್ಲಿ ತಿಳಿಸಿರುವ ಮಾನದಂಡಗಳನ್ನು ಅನುಸತಕ್ಕದ್ದು.

10.12. ಬಿ.ಸಿ.ಎ., ಬಿ.ಬಿ.ಎ/ಬಿ.ಬಿ.ಎಂ., ಪದವಿ ಕೋರ್ಸುಗಳ ನವೀನ ಕಾಲೇಜು ಪ್ರಾರಂಭಿಸಲು ಇಚ್ಛಿಸುವ ಉದ್ದೇಶಿತ ಕಾಲೇಜಿನವರು ಕಡ್ಡಾಯವಾಗಿ ಯುಜಿಸಿ/AICTE ಸಂಸ್ಥೆ, ನವದೆಹಲಿ ಇವರಿಂದ ನಿಯಮಾನುಸಾರ ಅನುಮೋದನೆ ಪಡೆದಿರತಕ್ಕದ್ದು

11. ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರು, ಸರ್ಕಾರದ/ಸಾರ್ವಜನಿಕ ಶಿಕ್ಷಣ ಇಲಾಖೆಯ ಪೂರ್ವಾನುಮತಿಯನ್ನು ಪಡೆಯದ ಹೊರತು ಯಾವುದೇ ಹೊಸ ಕೋರ್ಸ್/ ಭಾಷಾ ವಿಷಯ/ ಹೆಚ್ಚುವರಿ ಪ್ರವೇಶಾತಿ ಸಂಖ್ಯೆ ಹಾಗೂ ವಿದ್ಯಾರ್ಥಿ ಪ್ರಮಾಣದ ಹೆಚ್ಚಳಕ್ಕೆ ಸಂಯೋಜನೆ ಕೋರಿ ಅರ್ಜಿ ಸಲ್ಲಿಸುವಂತಿಲ್ಲ. ಸರ್ಕಾರದ ಅನುಮತಿ ಇಲ್ಲದೆ ಸಲ್ಲಿಸುವ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಮುಂದುವರಿಕೆ ಸಂಯೋಜನೆಗಾಗಿ ಅರ್ಜಿ ಸಲ್ಲಿಸುವಾಗ ಪ್ರಸ್ತುತ ಮಂಜೂರಾಗಿರುವ ಕೋರ್ಸು, ಭಾಷಾ ವಿಷಯ, ಐಚ್ಛಿಕ ವಿಷಯ ಸಮೂಹ ಹಾಗೂ ಪ್ರವೇಶ ಮಿತಿಗಳಿಗೆ ಸಂಬಂಧಿಸಿದ ಮಾಹಿತಿಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ ಅರ್ಜಿಯಲ್ಲಿ ನಮೂದಿಸಬೇಕು.

12. **ಸರ್ಕಾರದ ಆದೇಶ ಸಂಖ್ಯೆ ಇಡಿ:166 ಯುಎನ್ಇ 2023, ದಿನಾಂಕ:08.05.2024ರ ಪ್ರಕಾರ 2024–25ನೇ ಶೈಕ್ಷಣಿಕ ವರ್ಷದಿಂದ ಕರ್ನಾಟಕ ರಾಜ್ಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಲಾಗಿದ್ದು, 2021–22ನೇ ಶೈಕ್ಷಣಿಕ ವರ್ಷಕ್ಕಿಂತ ಮುಂಚೆ ಇದ್ದಂತೆ, ಬಿ.ಎ., ಮತ್ತು ಬಿ.ಎಸ್ಸಿ., ಪದವಿಗಳಿಗೆ ಮೂರು(03) ಮೇಜರ್ ವಿಷಯ ಸಮೂಹಗಳಿಗೆ(Combinations) ಅನುಗುಣವಾಗಿ ವಿಶ್ವವಿದ್ಯಾನಿಲಯದಿಂದ ಯುಯುಸಿಎಂಎಸ್ ಆನ್‌ಲೈನ್ ತಂತ್ರಾಂಶದಲ್ಲಿ ಪ್ರವೇಶಮಿತಿ ಅನುಮೋದನೆ ಪಡೆಯಲು ಸೂಚಿಸಿದೆ ಹಾಗೂ ಆ ಪ್ರಕಾರವಾಗಿಯೇ ಸಂಯೋಜನೆ ಪ್ರಕ್ರಿಯೆ ನಡೆಸಲಾಗುವುದು.**

13. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಯವರು ನಡೆಸುವ ಕಾಲೇಜುಗಳು ನಿಗದಿತ ಸಂಯೋಜನಾ ಶುಲ್ಕದಲ್ಲಿ ಶೇಕಡಾ 50ರಷ್ಟು ಮಾತ್ರ ಪಾವತಿಸಬಹುದಾಗಿದೆ. (ಅಭಿವೃದ್ಧಿ ಮತ್ತು ಸಂಯೋಜನಾ ಪ್ರಕ್ರಿಯೆಗಳ ಶುಲ್ಕವನ್ನು ಪೂರ್ಣವಾಗಿ ಪಾವತಿಸತಕ್ಕದ್ದು) ಇದಕ್ಕೆ ಪೂರಕವಾಗಿ ಸಂಬಂಧಿಸಿದ ಇಲಾಖೆಯಿಂದ ಪಡೆದಿರುವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಅಂತಹ ಪ್ರಮಾಣಪತ್ರ ಸಲ್ಲಿಸದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅರ್ಜಿಗಳೆಂದು ಪರಿಗಣಿಸಲಾಗುವುದಿಲ್ಲ.

14. ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ರೆಡ್‌ಕ್ರಾಸ್ ಘಟಕವನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು.

15. ವಿಶ್ವವಿದ್ಯಾನಿಲಯದ ಸಂಯೋಜಿತ ಎಲ್ಲಾ ಸರ್ಕಾರಿ/ ಖಾಸಗಿ ಕಾಲೇಜಿನ ಕಟ್ಟಡಗಳ ಸಧೃಡತೆ/ ಸುರಕ್ಷತೆ ಕುರಿತು National Building Code-2016ರ ನಿಯಮಾನುಸಾರ ಹಾಗೂ ಸರ್ಕಾರದ ನಿರ್ದೇಶಾನುಸಾರ, ಲೋಕೋಪಯೋಗಿ ಇಲಾಖೆ ಮತ್ತು Fire Service Departmentನಿಂದ (Compliance Certificates) ಧೃಢೀಕರಣ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.



Scanned with AltaScanner

16. ಶಾಶ್ವತ ಸಂಯೋಜನೆ ಹೊಂದಿರುವ ಕಾಲೇಜುಗಳು ಈಗಾಗಲೇ ಶಾಶ್ವತ ಸಂಯೋಜನೆ ಪಡೆದ ಪದವಿ ಕೋರ್ಸ್‌ಗಳ ಐಚ್ಛಿಕ ವಿಷಯ/ ಭಾಷಾ ವಿಷಯಗಳಲ್ಲಿ ತಾತ್ಕಾಲಿಕ ಸಂಯೋಜನೆ (Extension for Temporary Affiliation) ಪಡೆದಿದ್ದಲ್ಲಿ ಅವುಗಳ ಮುಂದುವರಿಕೆ/ ಶಾಶ್ವತ ಸಂಯೋಜನೆಗಾಗಿ ಆನ್‌ಲೈನ್ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

17. ಸಂಯೋಜನಾ ಅರ್ಜಿಯಲ್ಲಿ ನಮೂದಿಸಿರುವ ಕೋರ್ಸು, ಐಚ್ಛಿಕ ವಿಷಯ ಮತ್ತು ಭಾಷಾ ವಿಷಯಗಳನ್ನು ಹೊರತುಪಡಿಸಿ ಇತರೆ ವಿಷಯಗಳಿಗಾಗಿ ಸ್ಥಳೀಯ ತಪಾಸಣಾ ಸಮಿತಿ ಕಾಲೇಜಿಗೆ ಭೇಟಿ ನೀಡುವ ಸಂದರ್ಭದಲ್ಲಿ ಅಥವಾ ನಂತರದ ಸಂದರ್ಭದಲ್ಲಿ ಸಲ್ಲಿಸುವ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

18. ಯು.ಜಿ.ಸಿ. ಸರ್ಕಾರ ಹಾಗೂ ವಿಶ್ವವಿದ್ಯಾನಿಲಯದ ಸಂಯೋಜನೆಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಹೊರಡಿಸುವ ನೀತಿ ಸಂಹಿತೆಗಳನ್ನು/ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

19. ನಿಗದಿತ ಸಂಯೋಜನಾ ಅರ್ಜಿ ಶುಲ್ಕ ರೂ.5,000=00(ರೂಪಾಯಿ ಐದು ಸಾವಿರ ಮಾತ್ರ)ಗಳನ್ನು ಮತ್ತು ಸಂಬಂಧಪಟ್ಟ ಸಂಯೋಜನಾ ಶುಲ್ಕಗಳನ್ನು ಸಂಯೋಜನಾ ಖಾತೆ ಸಂಖ್ಯೆ: **64050645885**ಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ದಾವಣಗೆರೆ ವಿಶ್ವವಿದ್ಯಾನಿಲಯ ಕ್ಯಾಂಪಸ್, ಶಿವಗಂಗೋತ್ರಿ, ದಾವಣಗೆರೆ – 577 007 (IFSC Code No.SBIN0040869)ಬ್ಯಾಂಕ್ ಖಾತೆಗೆ ಜಮೆ ಮಾಡಲು ಸೂಚಿಸಲಾಗಿದೆ.

20. ಸಂಯೋಜನೆಗೆ ಅರ್ಜಿ ಸಲ್ಲಿಸುವ ಅಧಿಕೃತ ಅಂತರ್ಜಾಲ ವಿಳಾಸ: **https://uucms.karnataka.gov.in/Login/Index** ಭರ್ತಿ ಮಾಡಿದ ಅನ್‌ಲೈನ್ ಅರ್ಜಿಯ ಎರಡು ಹಾರ್ಡ್ ಪ್ರತಿಯನ್ನು ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ– 577007 ಇವರ ಕಛೇರಿಗೆ ಸಲ್ಲಿಸತಕ್ಕದ್ದು.

21. ಭರ್ತಿ ಮಾಡಿದ ಅರ್ಜಿಗಳನ್ನು ಈ ಕೆಳಕಂಡ ದಿನಾಂಕಗಳ ಒಳಗಾಗಿ ಸಲ್ಲಿಸಲು ಸೂಚಿಸಲಾಗಿದೆ.

| | | | |
|---|---|---|---|
| 1. | ದಂಡ ಶುಲ್ಕವಿಲ್ಲದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | : | **25.05.2024** |
| 2. | ರೂ.20,000=00 ದಂಡ ಶುಲ್ಕದೊಡನೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | : | **28.05.2024** |

22. ಮೇಲ್ಕಂಡ ದಿನಾಂಕಗಳ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕಾಗಿ ಪರಿಗಣಿಸುವುದಿಲ್ಲ.

23. ಸಂಯೋಜನಾ ಶುಲ್ಕ ಹಾಗೂ ಸಂಯೋಜೆಗೆ ಸಂಬಂಧಪಟ್ಟ ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾನಿಲಯದ **http://davangereuniversity.ac.in** ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ ಇವರನ್ನು ಕಛೇರಿ ವೇಳೆಯಲ್ಲಿ ಭೇಟಿ ಮಾಡಬಹುದಾಗಿದೆ.

**ಷರಾ:**

1. ಕಳೆದ ಮೂರು ಶೈಕ್ಷಣಿಕ ವರ್ಷಗಳ ಅವಧಿಯ ಸಂಯೋಜನಾ ಆದೇಶ ಮತ್ತು LIC ವರದಿಗಳನ್ನು ಅರ್ಜಿ ಜೊತೆಯಲ್ಲಿ ಕಡ್ಡಾಯವಾಗಿ ಲಗತ್ತಿಸಿರಬೇಕು.
2. ಕಾಲೇಜಿನ ನ್ಯಾಕ್ ಮಾನ್ಯತೆ, ಯುಜಿಸಿ ಕಾಯ್ದೆಯ ಸೆಕ್ಷನ್ 2(f), 12(B)ರಡಿಯಲ್ಲಿ ಮಾನ್ಯತೆ ಹೊಂದಿದ ಪ್ರಮಾಣ ಪತ್ರಗಳನ್ನು ಅರ್ಜಿ ಜೊತೆಯಲ್ಲಿ ಕಡ್ಡಾಯವಾಗಿ ಲಗತ್ತಿಸಿರಬೇಕು.
3. ಕಾಲೇಜಿಗೆ ಶಾಶ್ವತ ಸಂಯೋಜನೆಗೆ (Permanent Affiliation)ಅರ್ಜಿ ಸಲ್ಲಿಸುವಾಗ, ಕಳೆದ ಐದು ಶೈಕ್ಷಣಿಕ ವರ್ಷಗಳ ಅವಧಿಯ ಸಂಯೋಜನಾ ಆದೇಶ ಮತ್ತು LIC ವರದಿಗಳನ್ನು ಅರ್ಜಿ ಜೊತೆಯಲ್ಲಿ ಕಡ್ಡಾಯವಾಗಿ ಲಗತ್ತಿಸಿರಬೇಕು.

13/05/2024

**ಕುಲಸಚಿವರು,**
**ದಾವಣಗೆರೆ ವಿಶ್ವವಿದ್ಯಾನಿಲಯ**
**ಶಿವಗಂಗೋತ್ರಿ, ದಾವಣಗೆರೆ-577007**



Scanned with AltaScanner

ಗೆ,

ವಿಶ್ವವಿದ್ಯಾನಿಲಯದ ಸಂಲಗ್ನಗೊಂಡ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ/ ಸಂಯೋಜನಾಧಿಕಾರಿಗಳಿಗೆ,

ಪ್ರತಿಗಳು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-1), ಕರ್ನಾಟಕ ಸರ್ಕಾರ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು
2. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಾಲೇಜು ಶಿಕ್ಷಣ ಇಲಾಖೆ, ಸಹ್ಯಾದ್ರಿ ಕಾಲೇಜು ಆವರಣ, ವಿದ್ಯಾನಗರ, ಶಿವಮೊಗ್ಗ-577203
4. ನಿರ್ದೇಶಕರು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ – ಈ ಪ್ರಕಟಣೆಯ ಸಾರಾಂಶವನ್ನು ಸುದ್ದಿರೂಪದಲ್ಲಿ ಪ್ರಕಟಿಸಲು ಕೋರಲಾಗಿದೆ.
5. ಕುಲಸಚಿವರು-ಕುವೆಂಪು ವಿಶ್ವವಿದ್ಯಾನಿಲಯ/ಮೈಸೂರು ವಿಶ್ವವಿದ್ಯಾನಿಲಯ/ಮಂಗಳೂರು ವಿಶ್ವವಿದ್ಯಾನಿಲಯ/ ತುಮಕೂರು ವಿಶ್ವವಿದ್ಯಾನಿಲಯ/ ಬೆಂಗಳೂರು ವಿಶ್ವವಿದ್ಯಾನಿಲಯ/ ಕರ್ನಾಟಕ ವಿಶ್ವವಿದ್ಯಾನಿಲಯ/ ಗುಲ್ಬರ್ಗಾ ವಿಶ್ವವಿದ್ಯಾನಿಲಯ/ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ/ ರಾಣಿಚೆನ್ನಮ್ಮ ವಿಶ್ವವಿದ್ಯಾನಿಲಯ/ ಕನ್ನಡ ವಿಶ್ವವಿದ್ಯಾನಿಲಯ.
6. ಸಂಯೋಜನಾಧಿಕಾರಿಗಳು, ಐ.ಸಿ.ಟಿ. ಸೆಲ್, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ – ಸದರಿ ವಿಷಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
7. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪ)/ಹಣಕಾಸು ಅಧಿಕಾರಿಗಳ ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ-577007.
8. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ-577007
9. ಕಛೇರಿ ಪ್ರತಿ.



Scanned with AltaScanner